ÀAkashvani : Bangalore
Regional Bulletin In Kannada
12.05.2025 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಭಾರತ - ಪಾಕಿಸ್ತಾನ ಸೇನಾ ಕಾರ್ಯಾಚರಣೆಗಳ ಮಹಾನಿರ್ದೇಶಕರ ಮಾತುಕತೆ ಸಂಜೆ ನಡೆಯುವ ನಿರೀಕ್ಷೆ
- ದೇಶದ ಭದ್ರತೆಗೆ ಹತ್ತು ಉಪಗ್ರಹಗಳ ನಿರಂತರ ಕಣ್ಗಾವಲು - ಇಸ್ರೋ ಅಧ್ಯಕ್ಷ ವಿ.ನಾರಾಯಣನ್
- ದಾವಣಗೆರೆ, ಯಾದಗಿರಿ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಇಂದು ಅಣುಕು ಕವಾಯತು
- ನಾಡಿನೆಲ್ಲೆಡೆ ಇಂದು ಬುದ್ದ ಪೂರ್ಣಿಮೆ; ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರ ಶುಭಾಷಯ

<><*<><>*><>

ಭಾರತ ಹಾಗೂ ಪಾಕಿಸ್ತಾನ ದೇಶಗಳ ಸೇನಾ ಕಾರ್ಯಾಚರಣೆಗಳ ಮಹಾನಿರ್ದೇಶಕರ-ಡಿಜಿಎಂಒಗಳ ನಡುವಣ ಮಾತುಕತೆ ಇಂದು ಸಂಜೆ ನಡೆಯುವ ನಿರೀಕ್ಷೆಯಿದೆ. ಉಭಯ ದೇಶಗಳ ಡಿಜಿಎಂಒ ಗಳ ಸಭೆ ಈ ಮೊದಲು ಅಪರಾಹ್ನ ೧೨ ಗಂಟೆಗೆ ನಿಗದಿಯಾಗಿತ್ತು.

<><*<><>*><>

ದೇಶದ ನಾಗರಿಕರ ಸುರಕ್ಷತೆ ಹಾಗೂ ಭದ್ರತೆಯನ್ನು ಖಾತರಿಪಡಿಸುವ ವ್ಯೂಹಾತ್ಮಕ ಉದ್ದೇಶದಿಂದ ೧೦ ಉಪಗ್ರಹಗಳು ನಿರಂತರವಾಗಿ ದಿನದ ೨೪ ಗಂಟೆಗಳೂ ಸಹ ಕಾರ್ಯ ನಿರ್ವಹಿಸುತ್ತಿವೆ ಎಂದು ಇಸ್ರೋ ಅಧ್ಯಕ್ಷ ವಿ.ನಾರಾಯಣನ್ ಹೇಳಿದ್ದಾರೆ. ನಿನ್ನೆ ಮಣಿಪುರದ ಇಂಫಾಲದ ಕೇಂದ್ರ ಕೃಷಿ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ನಮ್ಮ ದೇಶದ ಸುರಕ್ಷತೆಯನ್ನು ಖಾತರಿಪಡಿಸಿಕೊಳ್ಳಲು ನಮ್ಮ ೭ ಸಾವಿರ ಕಿಲೋಮೀಟರ್ ಉದ್ದದ ಸಮುದ್ರ ತೀರಪ್ರದೇಶಗಳ ಮೇಲೆ ನಿಗಾವಹಿಸಬೇಕು ಎಂದರು. ಉಪಗ್ರಹ ಹಾಗೂ ಡ್ರೋನ್ ತಂತ್ರಜ್ಞಾನವಿಲ್ಲದೆ ನಾವು ಈ ವಿಷಯಗಳಲ್ಲಿ ಏನನ್ನೂ ಸಾಧಿಸಲು ಸಾಧ್ಯವಿಲ್ಲ ಎಂದು ಹೇಳಿದರು. ಹಲವು ಉಪಗ್ರಹಗಳ ಮೂಲಕ ಇಸ್ರೋ, ಕೃಷಿ, ಟೆಲಿ-ಶಿಕ್ಷಣ, ಟೆಲಿ-ಮೆಡಿಸನ್, ದೂರದರ್ಶನ ಪ್ರಸಾರ, ಹವಾಮಾನ ಮುನ್ಸೂಚನೆ, ಆಹಾರ ವಲಯಗಳು, ಭದ್ರತೆ ಹಾಗೂ ಕಾರ್ಯತಂತ್ರ ಕ್ಷೇತ್ರಗಳಲ್ಲಿ ಸಾಮಾನ್ಯ ಜನರಿಗೆ ಸೇವೆ ಸಲ್ಲಿಸುತ್ತಿದೆ ಎಂದು ಹೇಳಿದರು. ೯ ಬಾಹ್ಯಾಕಾಶ ವಲಯಗಳಲ್ಲಿ ಭಾರತ, ವಿಶ್ವದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ. ಚಂದ್ರಯಾನ-೧ ಮಿಷನ್ ಚಂದ್ರನ ಮೇಲ್ಮೈನಲ್ಲಿ ನೀರಿನ ಅಣುಗಳ ಪುರಾವೆಗಳನ್ನು ಕಂಡು ಹಿಡಿದಿದೆ. ಇದನ್ನು ಸಾಧಿಸಿದ ಮೊದಲ ದೇಶ ಭಾರತವಾಗಿದೆ. ಭಾರತದಿಂದ ೩೪ ದೇಶಗಳ ೪೩೩ ಉಪಗ್ರಹಗಳನ್ನು ಕಕ್ಷೆಗೆ ಉಡಾವಣೆ ಮಾಡಲಾಗಿದೆ ಎಂದರು. ೧೯೭೫ರವರೆಗೆ ಭಾರತದಲ್ಲಿ ಯಾವುದೇ ಉಪಗ್ರಹ ತಂತ್ರಜ್ಞಾನವಿರಲಿಲ್ಲ. ಆಗ ಮುಂದುವರಿದ ದೇಶಗಳಿಗೆ ಹೋಲಿಸಿದರೆ, ಭಾರತ ಬಾಹ್ಯಾಕಾಶ

ತಂತ್ರಜ್ಞಾನದಲ್ಲಿ ೭೦ ವರ್ಷಗಳ ಹಿಂದೆ ಇತ್ತು. ಸಾಮಾನ್ಯ ಜನರ ಅಭಿವೃದ್ಧಿಗೆ ಸುಧಾರಿತ ಉಪಗ್ರಹ ತಂತ್ರಜ್ಞಾನಗಳು ಅಗತ್ಯವಿದೆ ಎಂದು ಪ್ರತಿಪಾದಿಸಿದರು.

<><*<><>*><>

ವಿಶ್ವಕ್ಕೆ ಶಾಂತಿ ಹಾಗೂ ಅಹಿಂಸೆಯ ಮಹತ್ವವನ್ನು ಬೋಧಿಸಿದ ಭಗವಾನ್ ಬುದ್ದರ ಜಯಂತಿಯನ್ನು ಇಂದು ದೇಶಾದ್ಯಂತ ಆಚರಿಸಲಾಗುತ್ತಿದೆ. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಜಯಂತಿ ಕಾರ್ಯಕ್ರಮದಲ್ಲಿ ಭಗವಾನ್ ಬುದ್ದನ ಭಾವಚಿತ್ರಕ್ಕೆ ತಹಸೀಲ್ದಾರ್ ವಿಭಾ ವಿದ್ಯಾ ರಾಥೋಡ್ ಪುಷ್ಪ ನಮನ ಸಲ್ಲಿಸಿದರು. ಬುದ್ದ ಪೂರ್ಣಿಮೆ ಅಂಗವಾಗಿ ರಾಜ್ಯದ ಜನತೆಗೆ ಶುಭ ಹಾರೈಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೌತಮ ಬುದ್ಧನ ಸಂದೇಶಗಳಾದ ಪ್ರೀತಿ, ಸಹನೆ, ಸಹಬಾಳ್ವೆ ಮತ್ತು ಶಾಂತಿಯು ಮನುಕುಲವನ್ನು ಕೈಹಿಡಿದು ಮುನ್ನಡೆಸಲಿ ಎಂದು ಹಾರೈಸಿದ್ದಾರೆ. ತಮ್ಮ ಬೋಧನೆಗಳ ಮೂಲಕ ಬೌದ್ಧಿಕ ಅಂಧಕಾರವ ಕಳೆದು ಜ್ಞಾನದ ಬೆಳಕು ಹರಿಸಿದ ಅರಿವಿನ ಗುರು ಗೌತಮ ಬುದ್ಧನನ್ನು ಅರಿಯೋಣ, ಅವರಂತೆ ಬಾಳೋಣ ಎಂದು ಸಾಮಾಜಿಕ ಜಾಲತಾಣದಲ್ಲಿ ಕರೆ ನೀಡಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಬುದ್ದ ಪೂರ್ಣಿಮೆ ಅಂಗವಾಗಿ ನಾಡಿನ ಜನತೆಗೆ ಶುಭ ಕೋರಿದ್ದಾರೆ. ಭಗವಾನ್ ಬುದ್ಧನ ಆದರ್ಶಗಳು, ಅಹಿಂಸೆ, ತ್ಯಾಗದ ಪಾಠಗಳು ನಮ್ಮ ಬಾಳಿಗೆ ಆದರ್ಶವಾಗಲಿ ಎಂದು ಹೇಳಿದ್ದಾರೆ. ಬುದ್ದ ಜಯಂತಿ ಅಂಗವಾಗಿ ಚಿತ್ರದುರ್ಗದ ಬುದ್ದನಗರದ ಬುದ್ದನ ಪ್ರತಿಮೆಗೆ ಚಿತ್ರದುರ್ಗ ಉಪವಿಭಾಗಾಧಿಕಾರಿ ಮೆಬೂಬ್ ಜಿಲಾನ್ ಕುರೇಷಿ, ಪ್ರೊಫೆಸರ್ ಸಿ.ಕೆ.ಮಹೇಶ್ ಪುಷ್ಪ ನಮನ ಸಲ್ಲಿಸಿದರು.

<><*<><>*><>

ಜಲಾನಯನ ಅಭಿವೃದ್ಧಿ ಇಲಾಖೆ, ಕೃಷಿ ಇಲಾಖೆ ಹಾಗೂ ಗ್ರಾಮ್ಸ್ ಲಿಂಗಸೂಗೂರು ಅನುಷ್ಠಾನ ಸಂಸ್ಥೆಯಿಂದ. ಗಣಿಗಾರಿಕೆ ಪ್ರಭಾವಕ್ಕೆ ಒಳಗಾದ ವಲಯಗಳಿಗೆ ಸಮಗ್ರ ಪರಿಸರ ಯೋಜನೆಯಡಿ ಬಳ್ಳಾರಿ ತಾಲೂಕಿನ ಹೊನ್ನಾಳಿ ತಾಂಡದಲ್ಲಿ ಸಮುದಾಯ ಸಹಭಾಗಿತ್ವ ಕಾರ್ಯಕ್ರಮ ನಡೆಯಿತು. ರಾಜ್ಯದ ನಾಲ್ಕು ಜಿಲ್ಲೆಗಳು ಮೊದಲನೇ ಹಂತದಲ್ಲಿ ಈ ಕಾರ್ಯಕ್ರಮದಡಿ ಆಯ್ಕೆಯಾಗಿದ್ದು, ಈ ಪೈಕಿ ಬಳ್ಳಾರಿ ಜಿಲ್ಲೆಯು ಕೂಡ ಒಂದಾಗಿದೆ. ಈ ಯೋಜನೆ ಐದು ವರ್ಷದ ಅವಧಿಗೆ ಅನುಷ್ಠಾನ ಮಾಡುವುದಾಗಿದೆ. ಗಣಿಬಾಧಿತ ಪ್ರದೇಶದಲ್ಲಿ ನಾಶವಾಗಿರುವ ಮೇಲ್ಮಣ್ಣನ್ನು ಪುನರ್ ಸ್ಥಾಪಿಸಿ ಮಣ್ಣು ಮತ್ತು ನೀರಿನ ಸಂರಕ್ಷಣೆ ಮೂಲಕ ಮಣ್ಣಿನ ಫಲವತ್ತತೆಯನ್ನು ಪುನರುಜ್ಜೀವನಗೊಳಿಸಿ ವ್ಯವಸಾಯಕ್ಕೆ ಯೋಗ್ಯವನ್ನಾಗಿಸುವ ಮೂಲಕ ರೈತರಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸುಸ್ಥಿರತೆಯನ್ನು ಮೂಡಿಸಲು ಈ ಯೋಜನೆಯನ್ನು ಉಚ್ಚ ನ್ಯಾಯಾಲಯ ನಿರ್ದೇಶನದ ಮೇರೆಗೆ ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮ ನಿರ್ದೇಶನ ಮತ್ತು ಮಾರ್ಗದರ್ಶನದಲ್ಲಿ ಅನುಷ್ಠಾನವಾಗುತ್ತದೆ.

<><*<><>*><>

ಮತ- ಮಾನ್ಯಗಳು ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಜನರಲ್ಲಿ ಆತ್ಮಸ್ಥೈರ್ಯ ಹೆಚ್ಚಿಸಲು ಶ್ರಮಿಸಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಎಂದು ಮನವಿ ಮಾಡಿದ್ದಾರೆ. ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಜಾಲಿಬೆಂಚಿ ಗ್ರಾಮದಲ್ಲಿ

ದೇಗುಲದ ನೂತನ ಕಟ್ಟಡ ಉಧ್ಘಾಟನೆ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ದೇಗುಲಗಳು, ಮಠಮಾನ್ಯಗಳು ಹಾಗೂ ಮಠಾದೀಶರ ಬಗ್ಗೆ ಜನರಲ್ಲಿ ನಂಬಿಕೆ ಹೆಚ್ಚಿದ್ದು, ಈ ಸಂಸ್ಥೆಗಳು ಜನರಲ್ಲಿ ಆತ್ಮ ಸ್ಥೈರ್ಯ ಹೆಚ್ಚಿಸಲು ಶ್ರಮಿಸಬೇಕು ಎಂದು ಮನವಿಮಾಡಿದರು. ಮಹಿಳೆಯರು ಸರ್ಕಾರದ ಸೌಲಭ್ಯಗಳನ್ನು ಕೇಳಿ ಪಡೆದುಕೊಳ್ಳಬೇಕು. ರಸ್ತೆ, ಶೌಚಾಲಯ. ಮನೆ, ವೃದ್ಧಾಪ್ಯ ವೇತನ ಸೇರಿದಂತೆ ಸರ್ಕಾರ ಕಲ್ಪಿಸುವ ಸೌಲಭ್ಯಗಳನ್ನು ಪಡೆದುಕೊಳ್ಳಲು ಮುಂದಾಗಬೇಕು ಎಂದು ಕರೆ ನೀಡಿದರು.

<><*<><>*><>

ತುರ್ತು ಸಂದರ್ಭದಲ್ಲಿ ಪರಿಣಾಮಕಾರಿಯಾಗಿ ನಾಗರೀಕರ ರಕ್ಷಣೆ ಮಾಡುವ ಆಪರೇ?ನ್ ಅಭ್ಯಾಸ್ ಅಣಕು ಕಾರ್ಯಾಚರಣೆ ಅಂಗವಾಗಿ ವಾಣಿಜ್ಯ ನಗರಿ ದಾವಣಗೆರೆಯ ಎರಡು ಸ್ಥಳಗಳಲ್ಲಿಂದು ಮಾಕ್ ಡ್ರಿಲ್ ನಡೆಸಲಾಯಿತು. ನಗರದ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್‌ನಿಲ್ದಾಣದಲ್ಲಿ ನಡೆದ ಅಣಕು ಪ್ರದರ್ಶನದಲ್ಲಿ ಅಗ್ನಿ ಶಾಮಕ ದಳ, ಆರೋಗ್ಯ ಇಲಾಖೆ ಮತ್ತು ರಾಜ್ಯ ವಿಪತ್ತು ನಿರ್ವಹಣಾ ಘಟಕದ ಸಿಬ್ಬಂದಿಗಳು ಜಾಗೃತಿ ಮೂಡಿಸಿದರು. ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ, ರಾಜ್ಯ ಸರ್ಕಾರದ ಸೂಚನೆ ಮೇರೆಗೆ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳ ಜನನಿಬಿಡ ಪ್ರದೇಶಗಳಲ್ಲಿ ತುರ್ತು ಸಂದರ್ಭಗಳಲ್ಲಿ ಪ್ರಾಣ ಹಾನಿ ತಪ್ಪಿಸಲು ಏನೆಲ್ಲ ಮುಂಜಾಗ್ರತಾ ಕ್ರಮಗಳನ್ನು ಕೈ ಕೊಳ್ಳಬೇಕೆಂಬ ಕುರಿತು ಜಾಗೃತಿ ಮೂಡಿಸಲಾಗಿದೆ ಎಂದರು.

ಧ್ವನಿ: ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ( ೩೫ ಸೆಕೆಂಡ್ಸ್)

<><*<><>*><>

ಭಾರತ ಹಾಗೂ ಪಾಕಿಸ್ತಾನದ ನಡುವೆ ಸಂಘರ್ಷದ ಭೀತಿ ಉಂಟಾಗಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಸುಳ್ಳು ಸುದ್ದಿಗಳಿಗೆ ಕಿವಿಕೊಡಬಾರದು. ಬದಲಾಗಿ ಜಿಲ್ಲಾಡಳಿತ ನೀಡುವ ಅಧಿಕೃತ ಮಾಹಿತಿ ಅವಲಂಬಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಮನವಿ ಮಾಡಿದ್ದಾರೆ. ಅಲ್ಲದೆ, ಅಗತ್ಯ ವಸ್ತಗಳ ಬೆಲೆಯನ್ನು ಅನಗತ್ಯವಾಗಿ ಹೆಚ್ಚಳ ಮಾಡುವ ಪ್ರಯತ್ನಗಳು ಮಾಡಿದ್ದಲ್ಲಿ ಅಂತವರ ವಿರುದ್ದ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದ್ದಾರೆ. ಸಾಮಾಜಿಕ ಮಾಧ್ಯಮಗಳಲ್ಲಿ ಸುಳ್ಳು ಸುದ್ದಿ ಹರಡುವವರ ವಿರುದ್ಧ ಕಾನೂನು ರೀತ್ಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಪ್ರಸ್ತುತ ಇರುವ ಸಂದಿಗ್ಧ ಪರಿಸ್ಥಿತಿಯನ್ನು ದುರುಪಯೋಗ ಮಾಡಿಕೊಂಡು ಅಗತ್ಯ ವಸ್ತುಗಳ ಬೆಲೆ ಹೆಚ್ಚಿಸುವುದು ಸೂಕ್ತವಲ್ಲ. ನಾಗರಿಕರ ರಕ್ಷಣೆಯ ಭಾಗವಾಗಿ ಜನರು, ದೊಡ್ಡ ಪ್ರಮಾಣದ ಸಭೆ, ಸಮಾರಂಭ ಮಾಡುವುದಾಗಲಿ, ಸಾರ್ವಜನಿಕ ಸ್ಥಳಗಳಿಗೆ ಹೋಗುವುದನ್ನು ಮಾಡಬಾರದು ಮನವಿ ಮಾಡಿದ್ದಾರೆ. ಪ್ರಸ್ತುತ ಸಂದಿಗ್ಧ ಪರಿಸ್ಥಿತಿಯಲ್ಲಿ ಸಾರ್ವಜನಿಕರಿಗೆ ಯಾವುದೇ ತೊಂದರೆಯಾದಲ್ಲಿ ಕೂಡಲೇ ೨೪೯೭ ತುರ್ತು ಸಹಾಯವಾಣಿ ಸಂಖ್ಯೆ: ೦೮೪೭೩-೨೫೩೯೫೦ಗೆ ಸಂಪರ್ಕಿಸುವಂತೆ ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ

<><*<><>*><>

ಯುದ್ಧದಂತಹ ತುರ್ತು ಸಂದರ್ಭದಲ್ಲಿ ಉಂಟಾಗುವ ಸಂಭವನೀಯ ಅವಘಡಗಳಿಂದ ಸಾರ್ವಜನಿಕರನ್ನು ರಕ್ಷಿಸುವ ಕುರಿತಂತೆ ಅರಿವು ಮೂಡಿಸಲು ಕೇಂದ್ರ ಗೃಹ ಸಚಿವಾಲಯದ ನಿರ್ದೇಶನದಂತೆ "ಆಪರೇಷನ್ ಅಭ್ಯಾಸ್" ನಾಗರೀಕ ರಕ್ಷಣಾ ಮಾದರಿ ಅಭ್ಯಾಸವನ್ನು ಉತ್ತರ ಕನ್ನಡ ಜಿಲ್ಲೆಯ ಕಾರವಾರದ ವಿವಿಧ ಭಾಗಗಳಲ್ಲಿ ಇಂದು ಕೈಗೊಳ್ಳಲಾಗುತ್ತಿದೆ. ಸಂಜೆ ೪ ಗಂಟೆಗೆ ಕಾರವಾರದ ಬಿಣಗಾದ ಗ್ರಾಸಿಂ ಇಂಡಸ್ಟ್ರೀಸ್‌ನಲ್ಲಿ ಕಟ್ಟಡ ಕುಸಿದು ಬಿದ್ದಾಗ ಸ್ಥಳದಲ್ಲಿದ್ದ ಜನರನ್ನು ರಕ್ಷಣೆ ಮಾಡುವ ಬಗ್ಗೆ "ಅಣಕು ಕಾರ್ಯಾಚರಣೆ, ಕೈಗಾ ಅಣು ವಿದ್ಯುತ್ ಕೇಂದ್ರದ ಒಳಗೆ ಬೆಂಕಿ ಅವಘಡದಿಂದ ರಕ್ಷಣೆ ಮಾಡುವ ಅಣಕು ಕಾರ್ಯಾಚರಣೆ ಆಂತರಿಕವಾಗಿ ನಡೆಸಲಾಗುತ್ತಿದೆ. ಸಂಜೆ ೫ ಗಂಟೆಗೆ ಅಮದಳ್ಳಿಯ ನೇವಲ್ ಬೇಸ್ ಬಳಿ ಸಿವಿಲಿಯನ್ ಕಾಲೋನಿಯಲ್ಲಿ ಅಗ್ನಿ ಅವಘಡದಿಂದ ರಕ್ಷಣಾ ಕಾರ್ಯಾಚರಣೆ, ನಂತರ ಕಾರವಾರದ ರವೀಂದ್ರನಾಥ ಠಾಗೋರ ಬೀಚ್‌ನಲ್ಲಿ ಸಾರ್ವಜನಿಕರ ರಕ್ಷಣೆ ಮಾಡುವ ಅಣಕು ಕಾರ್ಯಾಚರಣೆ, ಅಣೆಕಟ್ಟು ಪ್ರದೇಶಗಳಲ್ಲಿ ಸಾರ್ವಜನಿಕರ ರಕ್ಷಣೆ ಕುರಿತಂತೆ ಹರ್ಟುಗಾ ಗ್ರಾಮದಿಂದ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವ ಕುರಿತು ಅಣಕು ಕಾರ್ಯಚರಣೆ ನಡೆಸಲಾಗುತ್ತದೆ. ಸಂಜೆ ೭.೩೦ಯಿಂದ ೮ ಗಂಟೆಯ ಅವಧಿಯಲ್ಲಿ ಬ್ಲ್ಯಾಕ್ ಔಟ್ ಕಾರ್ಯಾಚರಣೆ ನಡೆಸಲಾಗುತ್ತದೆ. ಈ ಅವಧಿಯಲ್ಲಿ ಸೈರನ್ ಸದ್ದು ಮೊಳಗಿದ ತಕ್ಷಣ ಸಾರ್ವಜನಿಕರು ಮನೆಗಳ ಕಿಟಕಿ, ಬಾಗಿಲು ಮುಚ್ಚಿ, ವಿದ್ಯುತ್ ದೀಪಗಳನ್ನು ಬಂದ್ ಮಾಡ ಮಾಡಬೇಕು. ವಾಹನಗಳನ್ನು ಚಲಾಯಿಸುತ್ತಿದ್ದರೆ ವಾಹನಗಳನ್ನು ಬಂದ್ ಮಾಡಿ ಹೆಡ್ ಲೈಟ್ ಆರಿಸಿ ಒಂದು ಪಕ್ಕದಲ್ಲಿ ಸುರಕ್ಷಿತವಾಗಿ ನಿಲ್ಲಬೇಕು. ಬ್ಲ್ಯಾಕ್ ಔಟ್ ಕಾರ್ಯಾಚರಣೆಯನ್ನು ಕಾರವಾರ ನಗರಪ್ರದೇಶದಲ್ಲಿ ಹಾಗೂ ಕೈಗಾ ಟೌನ್‌ಶಿಪ್‌ನಲ್ಲಿ ಮಾಡಲಾಗುತ್ತದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>